## <u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>

<u>ಸಿ.ಸಿ. ಸಂಖ್ಯೆ **1410/2024**</u>

<u>ಪಿರ್ಯಾದಿ</u> : ಶ್ರೀ ಬಿ.ಎ.ರವಿರಾಜ್,
ವಯಸ್ಸು ಸುಮಾರು 61 ವರ್ಷ,
ಬಿನ್ ಅಣ್ಣೇಗೌಡ,
ವಾಸಃ ಬಣಕಲ್ ಹೊರಟ್ಟಿ ಗ್ರಾಮ,
ಬಣಕಲ್ ಅಂಚೆ, ಮೂಡಿಗೆರೆ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

ವಿರುದ್ಧ

<u>ಆರೋಪಿ</u> : ಮೊಹಮ್ಮದ್ ಇಸ್ಮಾಯಿಲ್,
ವಯಸ್ಸು ಸುಮಾರು 38 ವರ್ಷ,
ಬಿನ್ ಅಬ್ಬಾಸ್, ವ್ಯಾಪಾರಸ್ಥರು,
ಮಲ್ನಾಡ್ ಕೆಫೆ ಹತ್ತಿರ, ಕೆ.ಎಂ ರಸೆ,
ಕೂಡಹಳ್ಳಿ ಗ್ರಾಮ, ಬಣಕಲ್ ಅಂಚೆ,
ಮೂಡಿಗೆರೆ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

<u>ಆಪಾದನೆಯ ಸಾರಾಂಶ</u>

ಶ್ರೀ ವಿಶ್ವನಾಥ್ ಎ., C/c ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ಮತ್ತು ಪಿರ್ಯಾದುದಾರರು ಹಲವಾರು ವರ್ಷಗಳಿಂದ ಪರಿಚಯಸ್ಥರಿದ್ದು, ಅದರಂತೆ ಫೆಬ್ರವರಿ-2022 ನೇ ಸಾಲಿನಲ್ಲಿ ವ್ಯಾಪಾರದ ಸಲುವಾಗಿ ಪಿರ್ಯಾದುದಾರರಿಂದ 5,50,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಕರ್ನಾಟಕ ಬ್ಯಾಂಕ್ ಲಿಮಿಟೆಡ್, ಬಣಕಲ್ ಶಾಖೆಯ ಚೆಕ್ ಸಂಖ್ಯೆ 750403, ದಿನಾಂಕ 04.10.2023, ರೂ.5,50,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಸದರಿ ಬ್ಯಾಂಕಿನಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ (Funds Insufficient) ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 18.10.2023 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್

ಇನ್ಸ್ಟ್ರುಮೆಂಟ್ ಆಕ್ಟ್ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

**(**ದಿನಾಂಕ 09.10.2024 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ**)**

**Sd/-**

ಮೂಡಿಗೆರೆ
ದಿನಾಂಕಃ 09.10.2024

C/c ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ, ಮೂಡಿಗೆರೆ.